**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:- 6ನೇ ರಾಜ್ಯ ವೇತನ ಆಯೋಗಕ್ಕೆ ಹುದ್ದೆಗಳನ್ನು ಸೃಜಿಸುವ ಬಗ್ಗೆ.**

ಓದಲಾಗಿದೆ: 1. ದಿನಾಂಕ: 01-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್ಆರ್‌ಪಿ 2017.
2. ದಿನಾಂಕ: 15-06-2017ರ ಸರ್ಕಾರಿ ಆದೇಶ ಸಂಖ್ಯೆ: ಆಇ 22 ಎಸ್ಆರ್‌ಪಿ 2017

**ಪ್ರಸ್ತಾವನೆ:**

ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು ರೂಪಿಸಲು, ಈ ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ದಿನಾಂಕ: 01-06-2017ರ ಸರ್ಕಾರಿ ಆದೇಶದಲ್ಲಿ ಅಧ್ಯಕ್ಷರನ್ನೂ ಒಳಗೊಂಡಂತೆ ತ್ರಿಸದಸ್ಯ 6ನೇ ರಾಜ್ಯ ವೇತನ ಆಯೋಗವನ್ನು ರಚಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ದಿನಾಂಕ: 15-06-2017ರ ಸರ್ಕಾರಿ ಆದೇಶದಲ್ಲಿ 6ನೇ ರಾಜ್ಯ ವೇತನ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸಲಾಗಿರುತ್ತದೆ.

ದಿನಾಂಕ: 01-06-2017ರ ಸರ್ಕಾರಿ ಆದೇಶದಲ್ಲಿ ರಚಿಸಲಾದ 6ನೇ ರಾಜ್ಯ ವೇತನ ಆಯೋಗದ ಕಾರ್ಯನಿರ್ವಹಣೆಗೆ ಪೂರಕವಾಗಿ ಹೊಸ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದ್ದು ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 33 ಎಸ್ಆರ್‌ಪಿ 2017 (ಭಾ),**
**ಬೆಂಗಳೂರು, ದಿನಾಂಕ 29ನೇ ಜೂನ್ 2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ: 01-06-2017ರ ಸರ್ಕಾರಿ ಆದೇಶದಲ್ಲಿ ರಚಿಸಿರುವ 6ನೇ ರಾಜ್ಯ ವೇತನ ಆಯೋಗಕ್ಕೆ ಈ ಕೆಳಕಂಡ 40 (ನಲವತ್ತು) ಹುದ್ದೆಗಳನ್ನು ಸೃಜಿಸಲು ಸರ್ಕಾರವು ಮಂಜೂರಾತಿ ನೀಡಿದೆ.

| ಕ್ರಮ ಸಂಖ್ಯೆ | ಹುದ್ದೆಗಳು | ಹುದ್ದೆಗಳ ಸಂಖ್ಯೆ |
|---|---|---|
| 1 | ಕಾರ್ಯದರ್ಶಿ (ಐ.ಎ.ಎಸ್.ವೃಂದ) | 1 |
| 2 | ಅಪರ / ಜಂಟಿ / ಉಪ ಕಾರ್ಯದರ್ಶಿ/ ವಿಶೇಷಾಧಿಕಾರಿ | 3 |

| | | |
|---|---|---|
| 3 | ಜಂಟಿ / ಉಪ / ಸಹಾಯಕ ನಿರ್ದೇಶಕರು (ಅಂಕಿಅಂಶ) | 1 |
| 4 | ಅಧೀನ ಕಾರ್ಯದರ್ಶಿ | 2 |
| 5 | ಶಾಖಾಧಿಕಾರಿ | 2 |
| 6 | ಹಿರಿಯ ಸಹಾಯಕರು / ಸಹಾಯಕರು/ ಶೀಘ್ರಲಿಪಿಗಾರರು / ಕಿರಿಯ ಸಹಾಯಕರು / ಬೆರಳಚ್ಚುಗಾರರು / ಡಾಟಾ ಎಂಟ್ರಿ ಆಪ್ರೇಟರ್ ಹಾಗೂ ಇತರೆ ಗ್ರೂಪ್ ಸಿ ವೃಂದದ ಹುದ್ದೆಗಳು | 25 |
| 7 | ದಲಾಯತ್ | 6 |

2. ವೇತನ ಆಯೋಗವು ಶೀಘ್ರದಲ್ಲಿ ಕಾರ್ಯಾರಂಭ ಮಾಡುವುದಕ್ಕೆ ಅನುಕೂಲವಾಗುವಂತೆ ಮೇಲ್ಕಂಡ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

3. ಸುಲಭವಾಗಿ ಹೊಂದಿಕೊಳ್ಳುವ ಮತ್ತು ಕಾರ್ಯ ನಿರ್ವಹಣೆಯಲ್ಲಿ ಅಂತರ್ ವಿನಿಮಯತೆಯ ದೃಷ್ಟಿಯಿಂದ ಅಪರ / ಜಂಟಿ / ಉಪ ಕಾರ್ಯದರ್ಶಿ/ ವಿಶೇಷಾಧಿಕಾರಿ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಗ್ರೂಪ್-ಸಿ ವೃಂದದ ಹುದ್ದೆಗಳನ್ನು ಒಟ್ಟಾರೆ ಸೃಜಿಸಲಾಗಿದ್ದು, ವೇತನ ಆಯೋಗವು ಅಗತ್ಯವಿರುವ ಸಿಬ್ಬಂದಿಗಳನ್ನು ನೇಮಿಸಿಕೊಳ್ಳುವ ಸ್ವಾತಂತ್ರವನ್ನು ಕಲ್ಪಿಸಲಾಗಿರುತ್ತದೆ.

4. 6ನೇ ರಾಜ್ಯ ವೇತನ ಆಯೋಗದ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2025-00-092-0-07-ಕರ್ನಾಟಕ ವೇತನ ಆಯೋಗ" ಇದರಿಂದ ಭರಿಸತಕ್ಕದ್ದು.

5. ಲೆಕ್ಕ ಶೀರ್ಷಿಕೆ "2025-00-092-0-07-ಕರ್ನಾಟಕ ವೇತನ ಆಯೋಗ" ಇದಕ್ಕೆ ಸಂಬಂಧಿಸಿದಂತೆ, ಉಪ ಕಾರ್ಯದರ್ಶಿ, 6ನೇ ರಾಜ್ಯ ವೇತನ ಆಯೋಗ ಇವರು ಹಣವನ್ನು ತೆಗೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯನ್ನಾಗಿ ಪ್ರಾಧೀಕರಿಸಲಾಗಿದೆ.

6. 6ನೇ ರಾಜ್ಯ ವೇತನ ಆಯೋಗಕ್ಕೆ ಸೃಜಿಸಲಾದ ಈ ಮೇಲಿನ ಹುದ್ದೆಗಳನ್ನು ಆಯೋಗದ ಅವಧಿಯವರೆಗೆ ತಾತ್ಕಾಲಿಕವಾಗಿ ಸೃಜನೆ ಮಾಡಲಾಗಿರುತ್ತದೆ. ಸೃಜಿಸಲಾದ ಹುದ್ದೆಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಕರ್ನಾಟಕ ಸರ್ಕಾರದ ಸಚಿವಾಲಯದ ಸೇವೆಯಿಂದ ಅಥವಾ ಸರ್ಕಾರದ ಇನ್ನಿತರೆ ಇಲಾಖೆಗಳಿಂದ ನಿಯೋಜನೆ ಮೇಲೆ ಭರ್ತಿ ಮಾಡತಕ್ಕದ್ದು.

7. ಈ ಆದೇಶವನ್ನು ಟಿಪ್ಪಣಿ ಸಂಖ್ಯೆ: ಸಿಆಸುಇ 240 ಸಿಶಾಸೇ 2017, ದಿನಾಂಕ: 28-06-2017ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನೀಡಿದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

29.08.17

(ಯು.ಹೆಚ್.ನಾರಾಯಣಸ್ವಾಮಿ)
ಸರ್ಕಾರದ ಉಪ ಕಾರ್ಯದರ್ಶಿ,
(ಆಡಳಿತ ಮತ್ತು ಸಮನ್ವಯ)
ಆರ್ಥಿಕ ಇಲಾಖೆ.

BHR 29/8/17

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
6. ಅಧ್ಯಕ್ಷರು / ಸದಸ್ಯರು, 6ನೇ ರಾಜ್ಯ ವೇತನ ಆಯೋಗ, ಬೆಂಗಳೂರು
7. ಕಾರ್ಯದರ್ಶಿ, 6ನೇ ರಾಜ್ಯ ವೇತನ ಆಯೋಗ, ಬೆಂಗಳೂರು
8. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇಲಾಖೆ (ಸೇವೆಗಳು)/(ಸಿಬ್ಬಂದಿ)/(ಆಡಳಿತ)/(ಲೆಕ್ಕಪತ್ರ)/ ಕಾರ್ಯಕಾರಿ
10. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
11. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**